# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ನಾನೇ ದೊಡ್ಡವನೆಂಬ ಅಹಂಕಾರ ಬೇಡವೇ ಬೇಡ.
ಸಹನೆ ತಾಳ್ಮೆ ಇರುವವರು ದೇವರಿದ್ದಂತೆ,
ಕೋಪ ತಾಪ ಇರುವವರು ಶತ್ರುಗಳಂತೆ,
ಯೋಗಭಾಗ್ಯವ ಪಡೆದವರು ಯೋಗಿಗಳಂತೆ,
ಪಾಪಕರ್ಮದಿ ತೊಡಗಿದವರು ಪಾಪಿಗಳಂತೆ,
ನ್ಯಾಯನೀತಿಯಲ್ಲಿ ಸಾಗುವವರು ಮನುಜರಂತೆ,
ಸತ್ಯಧರ್ಮದಲ್ಲಿ ನಡೆದು ಬಾಳುವವರು
ಭೂಮಿ ಪುತ್ರರಂತೆ, ಕಂಡರೂ ಎಲ್ಲವನ್ನು
ಅಳೆಯುವವನು ಭಗವಂತನೊಬ್ಬನೇ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 24-10-2025 to 30-10-2025 ಬೆಲೆ:10-00 ಸಂಪುಟ–1 ಸಂಚಿಕೆ–4 ಪುಟಗಳು–6










ಹಿಂದಿನ ಕಾಲದಲ್ಲಿ ಮನೆ ಮುಂದೆ ಸಗಣಿ ಸಾರಿಸಿ ರಂಗೋಲಿ ಹಾಕುವ ಪದ್ಧತಿ ಇತ್ತು. ಆದರೆ ಇಂದು ಆಧುನಿಕತೆಯ ಬರದಲ್ಲಿ ಸಗಣಿ ನಮ್ಮಿಂದ ದೂರವಾಗಿ, ರಂಗೋಲಿ ಮರಿಚಿಕೆ ಆಗುತ್ತಿದೆ. ಮನೆಯ ಮುಂದೆ ರಂಗೋಲಿ ಹಾಕುವುದರಿಂದ ನಕಾರಾತ್ಮಕ ಶಕ್ತಿ ದೂರವಾಗಿ, ಸಕಾರಾತ್ಮಕ ಶಕ್ತಿ ಹೆಚ್ಚಾಗುತ್ತದೆ. ಅಷ್ಟೇ ಅಲ್ಲದೆ ಲಕ್ಷ್ಮಿ ದೇವಿಯ ಆಶೀರ್ವಾದ ಸಿಗುತ್ತದೆ ಎನ್ನುವುದು ನಂಬಿಕೆ. ಅದರ ಜೊತೆ ಅಕ್ಕಿಯ ಪುಡಿಯಿಂದ ರಂಗೋಲಿ ಹಾಕುವುದರಿಂದ ಇರುವೆಯಂತಹ ಜೀವಿಗಳಿಗೆ ಆಹಾರ ನೀಡಿದ ತೃಪ್ತಿಯೂ ನಮ್ಮದಾಗಲಿದೆ.

## ನೇತ್ರಾವತಿಯ ನೀರು ಕುಡಿಯಲು ಯೋಗ್ಯವಲ್ಲ..?




ಮಂಗಳೂರು : ತುಳುನಾಡಿನ ಪವಿತ್ರ ನದಿ, ಜೀವನಾಡಿ ಎಂದೆಲ್ಲಾ ಹೇಳಲಾಗುವ ನೇತ್ರಾವತಿಯ ನೀರು ಈಗ ಗೃಹ ಬಳಕೆಗೆ ಮಾತ್ರ ಯೋಗ್ಯವಾಗಿದ್ದು, ಸಂಸ್ಕರಿಸದೇ ಸೇವಿಸಲು ಯೋಗ್ಯವಲ್ಲ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ತಿಳಿಸಿದೆ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಡೆಸುವ ನೀರಿನ ಪರೀಕ್ಷೆಯಲ್ಲಿ ರಾಜ್ಯದ 12 ಪ್ರಮುಖ ನದಿಗಳ ಪೈಕಿ ಯಾವ ನದಿಗಳ ನೀರೂ 'ಎ' ದರ್ಜೆಗೆ ಸೇರಿಲ್ಲ. ಅಂದರೆ 12 ನದಿಗಳ ನೀರು ನೇರವಾಗಿ ಕುಡಿಯಲು ಯೋಗ್ಯವಾಗಿಲ್ಲ, ಮಾಲಿನ್ಯ ನಿಯಂತ್ರಣ ಮಂಡಳಿ ರಾಜ್ಯದ 12 ನದಿಗಳ ನೀರನ್ನು 32 ಕಡೆ


ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ
ಮಂಗಳೂರು


## ಅಡಿಕೆ ಉತ್ಪನ್ನ ನಿಷೇಧಿಸಲು ವಿಶ್ವ ಆರೋಗ್ಯ ಸಂಸ್ಥೆ ಕರೆ..!

ಕೊಲಂಬೊ : ಕಳೆದ ಏಳು ದಶಕಗಳಿಂದ ಒಂದಲ್ಲ ಒಂದು ರೀತಿಯಲ್ಲಿ ಅಡಿಕೆಯ ಬಗ್ಗೆ ತಗಾದೆ ತೆಗೆಯುತ್ತಿರುವ ವಿಶ್ವ ಆರೋಗ್ಯ ಸಂಸ್ಥೆ ಈಗ ಕ್ಯಾನ್ಸರ್ ಕಾರಕ ನೆಪದಲ್ಲಿ ಅಡಕೆ ನಿಷೇಧಿಸಲು ಕರೆ ನೀಡಿದೆ. ಶ್ರೀಲಂಕಾದಲ್ಲಿ ನಡೆದ ಆಗ್ನೇಯ ಒಕ್ಕೂಟದೊಂದಿಗಿನ ವಿಶ್ವ ಆರೋಗ್ಯ ಸಂಸ್ಥೆಯ ಸಮಾವೇಶದಲ್ಲಿ ಅಡಿಕೆಯ ಬಗ್ಗೆ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ವಿಶ್ವ ಆರೋಗ್ಯ ಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ ಸಮಾವೇಶ ಅಕ್ಟೋಬರ್ 16ರಂದು ಮುಕ್ತಾಯಗೊಂಡಿದ್ದು, ಭಾರತ, ಬಾಂಗ್ಲಾ, ಭೂತಾನ್, ಉತ್ತರ ಕೊರಿಯಾ, ಮಾಲ್ಡೀವ್ಸ್, ಮಯನ್ಮಾರ್, ನೇಪಾಳ, ಶ್ರೀಲಂಕಾ




## ಎತ್ತಿ ಕಟ್ಟುವವರು ತಮ್ಮ ಮಕ್ಕಳನ್ನು ಗಲಭೆಗೆ ಕಳಿಸುವುದಿಲ್ಲ : ಸಿ.ಎಂ.

ಪುತ್ತೂರು: ಜಾತಿ ಧರ್ಮ ಎಂದು ಜಗಳ ತರುವವರ ತಮ್ಮ ಮಕ್ಕಳನ್ನು ಇದಕ್ಕೆ ಕಳಿಸುವುದಿಲ್ಲ. ಬಡವರ ಮಕ್ಕಳನ್ನು, ಅಮಾಯಕರನ್ನು ಕಳಿಸುತ್ತಾರೆ. ದಕ್ಷ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಈಗ ಸುಧಾರಣೆಯಾಗಿದೆಯಲ್ಲವೆ ಎಂದು ಕೇಳಿದರು. ಪೋಲಿಸ್ ಅಧಿಕಾರಿಗಳು ದಕ್ಷರಾಗಿದ್ದರೆ ಬದಲಾವಣೆ ತರಲು ಸಾಧ್ಯ. ಅಧಿಕಾರಿಗಳು ಮತ್ತು ಜನ ಪ್ರತಿನಿಧಿಗಳು ಅನ್ಯೋನ್ಯತೆಯಿಂದ ಕೆಲಸ ಮಾಡಬೇಕು. ಟೀಕೆ ಮಾಡುವವರು ಸುಮ್ಮನೆ ಟೀಕೆ ಮಾಡುತ್ತಾರೆ. ಏಕೆಂದರೆ ಜಾತಿ ಧರ್ಮದ ಹೆಸರಿನಲ್ಲಿ ಜಗಳ












ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಚಂದ್ರಮೌಳಿ-ರಾಮ್ ಹೊಸ ಸಾಹಸ 'ದಿಲ್ಮಾರ್'ಗೆ ಶಿವಣ್ಣ ಬೆಂಬಲ

ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ, ರೋರಿಂಗ್ ಸ್ಟಾರ್ ಶ್ರೀಮುರಳಿ ಸಾಥ್ ಕೊಟ್ಟಿರುವ ದಿಲ್ಮಾರ್ ಸಿನಿಮಾಗೀಗ ದೊಡ್ಮನೆ ದೊರೆ ಶಿವಣ್ಣನ ಬೆಂಬಲ ಸಿಕ್ಕಿದೆ. ಇದೇ ತಿಂಗಳ 24 ರಂದು ತೆರೆಗೆ ಬರ್ತಿರುವ ಕೆಜಿಎಫ್ ಡೈಲಾಗ್ ರೈಟರ್ ಚಂದ್ರಮೌಳಿಯವರ ಚೊಚ್ಚಲ ಸಿನಿಮಾಗೆ ಶಿವಣ್ಣ ಶುಭ ಹಾರೈಸಿದ್ದಾರೆ. ನಿನ್ನೆ ಬೆಂಗಳೂರಿನ ಎಂಎಂಬಿ ಲೆಗಸಿಯಲ್ಲಿ ನಡೆದ ಪ್ರೀ ರಿಲೀಸ್ ಇವೆಂಟ್‌ಗೆ ಶಿವರಾಜ್ ಕುಮಾರ್ ವಿಶೇಷ ಅತಿಥಿಯಾಗಿ ಆಗಮಿಸಿ ಇಡೀ ತಂಡಕ್ಕೆ ಬೆಸ್ಟ್ ವಿಷಸ್ ತಿಳಿಸಿದರು. ಈ ವೇಳೆ ಶಿವರಾಜ್ ಕುಮಾರ್ ಮಾತನಾಡಿ, ರಾಮ್ ಹಾರ್ಡ್ ವರ್ಕ್ ಮಾಡಿ ಮುಂದಿದ್ದಾರೆ. ಎಷ್ಟೋ ಏರುಪೇರು ನೋಡಿ ಬಂದವರು. ಕಳೆದ 15ವರ್ಷಗಳಿಂದ ನೋಡ್ತಾ ಇದ್ದೀನಿ. ಗಂಡ ಹೆಂಡ್ತಿ ಇಬ್ಬರು ಹೃದಯವಂತರು. ಹಾರ್ಟ್ ಚೆನ್ನಾಗಿ ಇದ್ದರೆ ನಮ್ಮ ಹಾರ್ಟ್ ಕನೆಕ್ಟ್ ಆಗುತ್ತದೆ. ಚಂದ್ರಮೌಳಿ ತುಂಬಾ ಹೋಪ್ ಆಗಿ ಮಾತನಾಡಿದರು. ಮನುಷ್ಯ ಲವಲವಿಕೆಯಿಂದ ಇದ್ದರೆ ಎಲ್ಲವೂ ಚೆನ್ನಾಗಿ ಆಗಲಿದೆ. ತುಂಬಾ ಓಪನ್ ಆಗಿ ಮಾತಾಡ್ತಾರೆ. ಈ ಸಿನಿಮಾ ಚೆನ್ನಾಗಿ ಆಗಲಿದೆ. ಯಾರು ಅಷ್ಟು ಇಸಿಯಾಗಿ ದುಡ್ಡು ಹಾಕಲ್ಲ. ನಿರ್ಮಾಪಕರು ಒಳ್ಳೆ ಸಿನಿಮಾ ಮಾಡಿದ್ದಾರೆ. ಈ ರೀತಿ ಸಮಾರಂಭಕ್ಕೆ ಬರಬೇಕು. ನಾವು ಬರದೇ ಇನ್ನಾರು ಬರುತ್ತಾರೆ. ಟ್ರೇಲರ್ ನೋಡಿದರೆ ಅರ್ಜುನ್ ರೆಡ್ಡಿ ಫೀಲ್ ಕೊಡುತ್ತದೆ. ಅಕ್ಟೋಬರ್ 24 ದೀಪಾವಳಿ ಹಬ್ಬದ ಪ್ರಯುಕ್ತ ಚಿತ್ರ ರಿಲೀಸ್ ಆಗಲಿದೆ. ದೀಪಾವಳಿ ಅಷ್ಟೇ ಬೆಳಕು ಚಿತ್ರರಂಗಕ್ಕೆ ಈ ಸಿನಿಮಾ ನೀಡಲಿ ಎಂದು ಹಾರೈಸಿದರು. ನಟಿ ಅದಿತಿ ಪ್ರಭುದೇವ ಮಾತನಾಡಿ, ಶಿವಣ್ಣ ಕಾರ್ಯಕ್ರಮದಲ್ಲಿ ಇರುವುದು ಬೆಳಕು ಮೂಡಿದ ಹಾಗೇ. ಒಂದು ಪಾಸಿಟಿವಿಟಿ ಇದ್ದಾಗೆ. ರಾಮ್ ಈ ಪಾತ್ರಕ್ಕೆ ಸೂಟೆಬಲ್ ಆಗಿದ್ದಾರೆ. ತುಂಬಾ ಚೆನ್ನಾಗಿ ಆಕ್ಟ್ ಮಾಡಿದ್ದಾರೆ. ಇದು ಸೈಕ್ ಪ್ರೀತಿ. ಈ ಲವ್ ಸ್ಟೋರಿಯಿಂದ ಇಡೀ ಸ್ಯಾಂಡಲ್‌ವುಡ್ ಲವ್ ಸ್ಟೋರಿ ಕಡೆ ಮುಖ ಮಾಡುವ ರೀತಿ ಆಗಲಿದೆ ಎಂಬ ನಂಬಿಕೆ ಇದೆ. ಪ್ರತಿಯೊಬ್ಬರೂ ಥಿಯೇಟರ್‌ಗೆ ಬಂದು ಸಿನಿಮಾ ನೋಡಿ ಎಂದರು. ನಟ ರಾಮ್ ಮಾತನಾಡಿ, ಇವತ್ತು ಶಿವಣ್ಣ ಬಗ್ಗೆ ಏನೂ ಹೇಳಿದರು ಸಾಲದು. ನಾನು ಕನಸು ಕಟ್ಟಿಕೊಂಡು ಬೆಂಗಳೂರಿಗೆ ಬಂದಾಗ ಸಾಕಷ್ಟು ಕಷ್ಟಪಟ್ಟಿದ್ದೇನೆ. ಶಿವಣ್ಣ ಗೀತಾಕ್ಕ ಶಿವ ಪಾರ್ವತಿ ತರ ಜೊತೆಯಲ್ಲಿ ನಿಂತಿದ್ದಾರೆ ಎಂದರು.



## ಕಿಚ್ಚ ಸುದೀಪ್ ಅವರಿಂದ 'ಬ್ರ್ಯಾಟ್' ಟ್ರೇಲರ್ ಅನಾವರಣ

ಡಾಲ್ಫಿನ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಮಂಜುನಾಥ್ ಕಂದಕೂರ್ ನಿರ್ಮಿಸಿರುವ, ಶಶಾಂಕ್ ನಿರ್ದೇಶನದ ಹಾಗೂ ಡಾರ್ಲಿಂಗ್ ಕೃಷ್ಣ ನಾಯಕನಾಗಿ ನಟಿಸಿರುವ ಬಹು ನಿರೀಕ್ಷಿತ 'ಬ್ರ್ಯಾಟ್' ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ 'ಬ್ರ್ಯಾಟ್' ಚಿತ್ರದ ಟ್ರೇಲರ್ ಅನ್ನು ಅನಾವರಣ ಮಾಡಿದರು. ನಂತರ ಸುದೀಪ್ ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ಶಶಾಂಕ್ ಒಬ್ಬರು ಒಳ್ಳೆಯ ಕಥೆಗಾರ. ಅವರ ನಿರ್ದೇಶನದ ಚಿತ್ರ ಎಂದ ಮೇಲೆ ಚೆನ್ನಾಗಿರುತ್ತದೆ. ಹಾಗೆ ಡಾರ್ಲಿಂಗ್ ಕೃಷ್ಣ ಕೂಡ ಉತ್ತಮ ನಟ. ಇವರಿಬ್ಬರ ಕಾಂಬಿನೇಶನ್‌ನಲ್ಲಿ ಮೂಡಿಬಂದಿದ್ದ 'ಕೌಸಲ್ಯ ಸುಪ್ರಜ ರಾಮ' ಚಿತ್ರ ಕೂಡ ಬಿಗ್ ಹಿಟ್ ಆಗಿತ್ತು. ಈ ಚಿತ್ರ ಕೂಡ ಸೂಪರ್‌ಹಿಟ್ ಆಗಲಿ ಎಂದು ಸುದೀಪ್ ಹಾರೈಸಿದರು. ಸುದೀಪ್ ಅವರು ನನಗೆ ಹಾಗೂ ಕೃಷ್ಣ ಇಬ್ಬರಿಗೂ ಬಹಳ ಲಕ್ಕಿ. ಏಕೆಂದರೆ ನಮ್ಮಿಬ್ಬರ ಕಾಂಬಿನೇಶನ್‌ನಲ್ಲಿ ಬಂದ ಹಿಂದಿನ ಚಿತ್ರ 'ಕೌಸಲ್ಯ ಸುಪ್ರಜ ರಾಮ' ಚಿತ್ರದ ಟ್ರೇಲರ್ ಅನ್ನು ಸುದೀಪ್ ಅವರೆ ಅನಾವರಣ ಮಾಡಿದ್ದು. ಅದು ಎಷ್ಟು ಹಿಟ್ ಆಯಿತು ಅಂತ ಎಲ್ಲರಿಗೂ ಗೊತ್ತಿದೆ. ಇಂದು 'ಬ್ರ್ಯಾಟ್' ಚಿತ್ರದ ಟ್ರೇಲರ್ ಕೂಡ ಸುದೀಪ್ ಅವರಿಂದಲೇ ಅನಾವರಣವಾಗಿದೆ. ಇದು ಕೂಡ ದೊಡ್ಡ ಹಿಟ್ ಆಗುವ ನಂಬಿಕೆ ಇದೆ. ಸುದೀಪ್ ಅವರಿಗೆ ಧನ್ಯವಾದ. ಇನ್ನೂ ನಾವು ಈ ಚಿತ್ರವನ್ನು ಪ್ಯಾನ್ ಇಂಡಿಯಾ ಚಿತ್ರ ಅಂತಲೇ ನಿರ್ಮಾಣ ಮಾಡಿದ್ದು. ಅದೇ ತರಹ ಈವರೆಗೂ ಟೀಸರ್ ಹಾಗೂ ಹಾಡುಗಳನ್ನು ಎಲ್ಲಾ ಭಾಷೆಗಳಲ್ಲೂ ಬಿಡುಗಡೆ ಮಾಡಿಕೊಂಡು ಬಂದಿದ್ದೇವೆ. ಆದರೆ ಟ್ರೇಲರ್ ಇಂದು ಕನ್ನಡದಲ್ಲಿ ಮಾತ್ರ ಬಿಡುಗಡೆಯಾಗಿದೆ. ನಂತರದ ದಿನಗಳಲ್ಲಿ ಬೇರೆ ಭಾಷೆಗಳ ಟ್ರೇಲರ್ ಅನಾವರಣವಾಗಲಿದೆ. ಚಿತ್ರತಂಡದ ಸಹಕಾರದಿಂದ 'ಬ್ರ್ಯಾಟ್' ಒಂದೊಳ್ಳೆ ಚಿತ್ರವಾಗಿ ನಿರ್ಮಾಣವಾಗಿದೆ. ಇದೇ ಅಕ್ಟೋಬರ್ 31ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ.



## ಕುಂತೀಪುತ್ರ 'ರಾಧೇಯ' ಚಿತ್ರದ ಟೀಸರ್ ಬಿಡುಗಡೆ

ನಟ, ನಿರ್ದೇಶಕ ಅಜೇಯ್ ರಾವ್ ಈಗ ರಾಧೇಯನಾಗಿದ್ದಾರೆ. ಹೌದು, ಅವರು ಹೊಸ ಚಿತ್ರದ ಹೆಸರು ರಾಧೇಯ. ಒಂದಷ್ಟು ವರ್ಷಗಳಿಂದ ಕೆಲ ನಿರ್ದೇಶಕರ ಜತೆ ಕೆಲಸ ಮಾಡಿ ಅನುಭವ ಪಡೆದಿರುವ ವೇದಗುರು ಇದೇ ಮೊದಲ ಬಾರಿಗೆ 'ರಾಧೇಯ' ಚಿತ್ರಕ್ಕೆ ಆಕ್ಷನ್-ಕಟ್ ಹೇಳಿದ್ದಾರೆ. ಜೊತೆಗೆ ಕೀರ್ತಿ ಚಾಹ್ನಾ ಸಿನಿಮಾ ಕಾರ್ಖಾನೆ ಮೂಲಕ ನಿರ್ಮಾಣ ಸಹ ಮಾಡಿದ್ದಾರೆ. ಕೃಷ್ಣ ಅಜಯ್ ರಾವ್ ಹಾಗೂ ಸೋನಾಲ್ ಮಂತೆರೋ ನಾಯಕ-ನಾಯಕಿಯಾಗಿ ಅಭಿನಯಿಸಿರುವ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ಈ ಸಂದರ್ಭದಲ್ಲಿ ನಿರ್ದೇಶಕ ವೇದಗುರು ಮಾತನಾಡುತ್ತ ಮಹಾಭಾರತದ ಕರ್ಣನ ಇನ್ನೊಂದು ಹೆಸರು 'ರಾಧೇಯ'. ಕರ್ಣನ ಸಾಕು ತಾಯಿ ಹೆಸರು ರಾಧಾ. ಆ ಕರ್ಣನಿಗೂ ಈ ಕಥೆಗೂ ಸಂಬಂಧವಿಲ್ಲ. ಆದರೆ ಅವನ ತ್ಯಾಗದ ಅಂಶ ನಮ್ಮ ಚಿತ್ರದಲ್ಲಿದೆ. ಮೊದಲು ಅಜಯ್ ರಾವ್ ಅವರಿಗೆ ಈ ಕಥೆ ಹೇಳಿದಾಗ ನಿರ್ದೇಶಕನಷ್ಟೇ ಆಗಿದ್ದೆ. ನಂತರ ನಿರ್ಮಾಪಕನಾದೆ. ಇದು ಲವ್ ಜಾನರ್ ಚಿತ್ರವಾದರೂ ಬೇರೆಯದೇ ರೀತಿ ಕಟ್ಟಿಕೊಡಲು ಪ್ರಯತ್ನಿಸಿದ್ದೇನೆ. ಈ ಹಂತದಲ್ಲಿ ನಮಗೆ ಶಕ್ತಿಯಾಗಿ ವಿತರಕ ಕಾಂತರಾಜು ಸಾಥ್ ನೀಡಿದ್ದಾರೆ. ನಮ್ಮ ರಾಧೇಯ ತನ್ನ ಪ್ರೀತಿಯನ್ನು ಹೇಗೆ ಉಳಿಸಿಕೊಳ್ಳುತ್ತಾನೆ. ಅದಕ್ಕಾಗಿ ಏನೆಲ್ಲಾ ಪ್ರಾಬ್ಲಮ್ ದಾಟಿ ಬರುತ್ತಾನೆ ಎಂಬುದನ್ನು ಪ್ಯೂರ್ ಲವ್‌ಸ್ಟೋರಿಯೊಂದಿಗೆ ಹೇಳಿದ್ದೇನೆ. ನನಗೆ ಸ್ಕ್ರಿಪ್ಟ್ ಮೇಲೆ ಇದ್ದ ನಂಬಿಕೆಯಿಂದಲೇ ನಿರ್ಮಾಪಕನಾದೆ. ಬೆಂಗಳೂರು ಸುತ್ತ ಮತ್ತು ಚಿತ್ರದ ಶೂಟಿಂಗ್ ಮಾಡಿದ್ದೇವೆ ಎಂದರು.



## 'ಫ್ಲರ್ಟ್' ಚಿತ್ರದ ಟ್ರೈಲರ್ ಕಿಚ್ಚ ಸುದೀಪ್ ಬಿಡುಗಡೆ

ಕನ್ನಡದ ಸುರಧ್ರೂಪಿ ನಟ ಚಂದನ್ ಕುಮಾರ್ ಫ್ಲರ್ಟ್ ಚಿತ್ರಕ್ಕೆ ಆಕ್ಷನ್‌ಕಟ್ ಹೇಳೋ ಜತೆಗೆ ಚಿತ್ರದ ನಾಯಕನಾಗೂ ನಟಿಸಿದ್ದಾರೆ. ಎವರೆಸ್ಟ್ ಪಿಕ್ಚರ್ಸ್ ಮೂಲಕ ನಿರ್ಮಾಣ ಸಹ ಮಾಡಿದ್ದಾರೆ. ಎ ಪ್ಯೂರ್ ಡವ್‌ಸ್ಟೋರಿ ಎಂಬ ಅಡಿಬರಹ ಫ್ಲರ್ಟ್ ಚಿತ್ರಕ್ಕಿದ್ದು, ನಿಮಿಕಾ ರತ್ನಾಕರ್, ಅಕ್ಷತಾ ಬೋಪಣ್ಣ ನಾಯಕಿಯರಾಗಿ ನಟಿಸಿದ್ದಾರೆ. ಈಗಾಗಲೇ ಬಿಡುಗಡೆಗೆ ಸಿದ್ದವಾಗಿರುವ ಈ ಚಿತ್ರದ ನೀ ನನ್ನ ಜೀವ ಎಂಬ ಫ್ರೆಂಡ್ ಶಿಪ್ ಹಾಡನ್ನು ಇತ್ತೀಚೆಗೆ ರಿಲೀಸ್ ಮಾಡೋ ಮೂಲಕ ಪ್ರಚಾರಕ್ಕೆ ಚಾಲನೆ ನೀಡಲಾಗಿತ್ತು. ಚಂದನ್ ಆಪ್ತರಾದ ಕಿಚ್ಚ ಸುದೀಪ್ ಆ ಹಾಡಿಗೆ ದನಿಯಾಗಿದ್ದರು. ನವೆಂಬರ್ 7ರಂದು ತೆರೆಗೆ ಬರಲು ಸಿದ್ದವಾಗಿರುವ ಈ ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ಮಾಲ್ ಆಫ್ ಏಷ್ಯಾದಲ್ಲಿ ನಡೆಯಿತು. ಮುಖ್ಯ ಅತಿಥಿಯಾಗಿ ಆಗಮಿಸಿದ ಕಿಚ್ಚ ಸುದೀಪ್ ಟ್ರೈಲರನ್ನು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಸಿನಿಮಾ ಬಗ್ಗೆ ಮಾತನಾಡಿದ ನಿರ್ದೇಶಕ ಚಂದನ್ ಈ ಸಿನಿಮಾ ಆರಂಭದಿಂದಲೂ ಸುದೀಪ್ ಅವರು ನನಗೆ ತುಂಬಾ ಸಪೋರ್ಟ್ ಮಾಡುತ್ತ ಬಂದಿದ್ದಾರೆ. ಅಕ್ಟೋಬರ್ 25ಕ್ಕೆ ಬಿಗ್‌ಬಾಸ್‌ನಲ್ಲಿ ಸುದೀಪ್ ಅವರನ್ನು ನೋಡಿ 10 ವರ್ಷವಾಗುತ್ತೆ. ಸಿಸಿಎಲ್‌ನಿಂದ ಹಿಡಿದು ಪ್ರೇಮಬರಹ ಚಿತ್ರಕ್ಕೆ ಅಲ್ಲದೆ ನಮ್ಮಹೋಟೆಲನ್ನು ಅವರೇ ಲಾಂಚ್ ಮಾಡಿಕೊಟ್ಟರು. ಇದೊಂದು ರೋಮ್‌ಕಾಮ್ ಸಿನಿಮಾ ಆದರೂ ಫ್ರೆಂಡ್‌ಶಿಪ್, ಲವ್, ಹೀಗೆ ಎಲ್ಲಾ ಎಂಟರ್‌ಟೈನಿಂಗ್ ಎಲಿಮೆಂಟ್ಸ್ ಇದೆ. ಫ್ಲರ್ಟ್ ಎಂದರೆ ಬರೀ ಚುಡಾಯಿಸುವುದು ಎಂದರ್ಥವಲ್ಲ. ಗಾಢವಾದ ಪ್ರೀತಿಯನ್ನೂ ಸಹ ಫ್ಲರ್ಟ್ ಎಂದೇ ಕರೆಯುತ್ತಾರೆ. ಎಲ್ಲರ ಡವ್‌ನಲ್ಲೂ ಒಂದೊಂದು ಲವ್ ಇರುತ್ತದೆ. ಚಿತ್ರದಲ್ಲಿ ಎಲ್ಲ ಪಾತ್ರಗಳಿಗೂ ವ್ಯಾಲ್ಯೂ ಇದೆ. ಚಿತ್ರದಲ್ಲಿ ರೋಮ್‌ಕಾಮ್ ಜತೆಗೆ ಸೈಕೋ ಕ್ಯಾರೆಕ್ಟರ್ ಕೂಡ ಇದೆ. ನನ್ನ ಭಾವ ಕೂಡ ಫೈನಾನ್ಷಿಯಲ್ ಸಪೋರ್ಟ್ ಮಾಡಿದ್ದಾರೆ ಎಂದರು.



## ಆಶ್ರಯ ಕ್ರಿಯೇಷನ್ಸ್ ನಿರ್ಮಾಣದ 'I Am ರೂಬಿ' ಚಿತ್ರಕ್ಕೆ ಆಕಾಶ್ ನಾಯಕ

ವಸಿಷ್ಠ ಸಿಂಹ ನಾಯಕರಾಗಿ ನಟಿಸಿದ್ದ 'Love ಲಿ' ಚಿತ್ರ ನಿರ್ದೇಶಿಸಿದ್ದ ಚೇತನ್ ಕೇಶವ್ ನಿರ್ದೇಶನದ ಎರಡನೇ ಸಿನಿಮಾದ ಶೀರ್ಷಿಕೆ ಬೆಳಕಿನ ಹಬ್ಬ ದೀಪಾವಳಿ ಸಂದರ್ಭದಲ್ಲಿ ಅನಾವರಣವಾಗಿದೆ. ಆಶ್ರಯ ಕ್ರಿಯೇಷನ್ಸ್ ಲಾಂಛನದಲ್ಲಿ ಡಾ||ಶಿವೇಗೌಡ ಸಿ.ವೈ ಹಾಗೂ "ಚಿಂಗಾರಿ" ಬಿ ಮಹದೇವ್ ಅವರು ನಿರ್ಮಿಸುತ್ತಿರುವ ಮತ್ತು ಆಕಾಶ್ ಎಂಬ ಮೈಸೂರಿನ ನೂತನ ಪ್ರತಿಭೆ ನಾಯಕನಾಗಿ ನಟಿಸುತ್ತಿರುವ ಈ ಚಿತ್ರಕ್ಕೆ 'I Am ರೂಬಿ' ಎಂದು ಹೆಸರಿಡಲಾಗಿದೆ. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಈ ನೂತನ ಚಿತ್ರದ ಬಗ್ಗೆ ಮಾಹಿತಿ ನೀಡಿದೆ. ನಿರ್ದೇಶಕ ಚೇತನ್ ಕೇಶವ ಅವರೆ ಕೌಟುಂಬಿಕ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದು ನಿರ್ದೇಶಿಸುತ್ತಿದ್ದಾರೆ. ಅನೂಪ್ ಸೀಳಿನ್ ಸಂಗೀತ ಸಂಯೋಜನೆ, ಅಶ್ವಿನ್ ಕೆನಡಿ ಛಾಯಾಗ್ರಹಣ, ಮಹೇಶ್ ತೊಗಟ ಸಂಕಲನ, ಪ್ರತಾಪ್ ಆರ್ ಮೆಂಡನ್ ಕಲಾ ನಿರ್ದೇಶನ ಹಾಗೂ ಡಾ| ಕೆ. ರವಿವರ್ಮ - ದಿಲೀಪ್ ಎಂ. ರಾಜ್ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ.



## ಪ್ರಭಾಸ್‌ಗೆ ಜನ್ಮದಿನದ ಶುಭಾಶಯಗಳು !

ನಟ ಪ್ರಭಾಸ್ ಸದ್ಯ ಪ್ಯಾನ್ ಇಂಡಿಯಾ ಹೀರೋ. ಸಾಲು ಸಾಲು ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ನೀಡುವ ಮೂಲಕ ಬಹುಬೇಡಿಕೆ ಸೃಷ್ಟಿಸಿಕೊಂಡಿದ್ದಾರೆ. ಇನ್ನೇನು ಬರ್ತಡೇ (ಅ.23) ಆಚರಿಸಿಕೊಳ್ಳಲಿದ್ದಾರೆ ಪ್ರಭಾಸ್. ಅವರ ಬರ್ತಡೇ ಕೇವಲ ತೆಲುಗು ಭಾಷಿಕ ರಾಜ್ಯಗಳಿಗೆ ಸೀಮಿತವಾಗಿಲ್ಲ. ಇಡೀ ಭಾರತ, ಇಡೀ ವಿಶ್ವ ಸೆಲೆಬ್ರೇಟ್ ಮಾಡಲು ಮುಂದಾಗಿದೆ. ಪ್ರಭಾಸ್ ಅವರ ಪ್ರತಿ ಸಿನಿಮಾ ಅವರ ಅಭಿಮಾನಿ ವಲಯದಲ್ಲಿ ಒಂದು ಉತ್ಸವವಾಗುತ್ತದೆ, ಪ್ರತಿ ಶೋ ಸೆನ್ಸೇಷನ್ ಸೃಷ್ಟಿಸುತ್ತದೆ. ಈ ಅಸಾಮಾನ್ಯ ಸೂಪರ್‌ಸ್ಟಾರ್ ಬಗ್ಗೆ ಬರ್ತಡೇ ಪ್ರಯುಕ್ತ ನೀವು ತಿಳಿದುಕೊಳ್ಳಲೇಬೇಕಾದ ಐದು ವಿಷಯಗಳು ಇಲ್ಲಿವೆ. ಪ್ಯಾನ್ ಇಂಡಿಯನ್ ಸೂಪರ್‌ಸ್ಟಾರ್ ಸದ್ಯ ಭಾರತದಲ್ಲಿ ಯಶಸ್ವಿ ಪ್ಯಾನ್ ಇಂಡಿಯನ್ ಹೀರೋ ಯಾರು ಎಂದರೆ, ಮೊದಲಿಗೆ ಬರುವ ಹೆಸರೇ ಪ್ರಭಾಸ್ ಅವರದ್ದು. ಸಾವಿರ ಸಾವಿರ ಕೋಟಿ ಬಾಚಿಕೊಂಡ ಅವರ ಸಿನಿಮಾಗಳೇ ಉದಾಹರಣೆ. ಈ ತಿಂಗಳು ಪ್ರಭಾಸ್‌ಗೆ ಸೇರಿದ್ದು ಪ್ರತಿ ವರ್ಷ, ಅಕ್ಟೋಬರ್ ತಿಂಗಳು ಬಂತೆಂದರೆ, ಅವರ ಫ್ಯಾನ್ಸ್ ದೃಷ್ಟಿ ಪ್ರಭಾಸ್ ಸಿನಿಮಾಗಳ ಮೇಲಿರುತ್ತೆ.



## ರಾಜ್ ವಿಜಯ್ ನಿರ್ದೇಶನದ 'ಗ್ರೀನ್' ಚಿತ್ರ ಈ ವಾರ ತೆರೆಗೆ

ರಾಜ್ ವಿಜಯ್ ಹಾಗೂ ಬಿ.ಎನ್ ಸ್ವಾಮಿ ನಿರ್ಮಾಣದ ಹಾಗೂ ರಾಜ್ ವಿಜಯ್ ನಿರ್ದೇಶನದ ವಿಭಿನ್ನ ಕಥಾಹಂದರ ಹೊಂದಿರುವ "ಗ್ರೀನ್" ಚಿತ್ರ ಈ ವಾರ ತೆರೆಗೆ ಬರುತ್ತಿದೆ. ನಿಶಾಂತ್ ಎನ್ ಎನ್ ಒಡೆತನದ ಗುನಾದ್ಯ ಪ್ರೊಡಕ್ಷನ್ಸ್ "ಗ್ರೀನ್" ಚಿತ್ರವನ್ನು ತೆರೆಗೆ ತರಲು ಬೆನ್ನೆಲುಬಾಗಿ ನಿಂತಿದೆ. ಈಗಾಗಲೇ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಂಡು ಹಲವು ಪ್ರಶಸ್ತಿಗಳ ಜೊತೆಗೆ ಪ್ರಶಂಸೆಯನ್ನು ಈ ಚಿತ್ರ ಪಡೆದುಕೊಂಡಿದೆ. ಗೋಪಾಲಕೃಷ್ಣ ದೇಶಪಾಂಡೆ, ಬಾಲಾಜಿ ಮನೋಹರ್, ಆರ್.ಜೆ.ವಿಕ್ಕಿ, ವಿಶ್ವನಾಥ್ ಮಾಂಡಲಿಕ, ಶಿವ ಮಂಜು, ಡಿಂಪಿ ಫದ್ಯಾ ಹಾಗೂ ಮುಂತಾದವರು ಅಭಿನಯಿಸಿರುವ ಈ ಚಿತ್ರಕ್ಕೆ ಕೆ.ಮಧುಸೂದನ್ ಛಾಯಾಗ್ರಹಣ ಹಾಗೂ ಶಕ್ತಿ ಅವರ ಸಂಗೀತ ನಿರ್ದೇಶನವಿದೆ. ಗ್ರೀನ್ ಒಂದು ಮನೋವೈಜ್ಞಾನಿಕ ಮನಸ್ಸನ್ನು ಬೆರಗುಗೊಳಿಸುವ ಥ್ರಿಲ್ಲರ್ ಚಿತ್ರವಾಗಿದ್ದು, ಇದು ವೀಕ್ಷಕರನ್ನು ಮಾನವ ಮನಸ್ಸಿನ ಆಳಕ್ಕೆ ಕರೆದೊಯ್ಯುತ್ತದೆ. ವಿಭಿನ್ನ ಕಥಾಹಂದರ ಹೊಂದಿರುವ "ಗ್ರೀನ್" ಚಿತ್ರಕ್ಕೆ ನಿರ್ದೇಶಕರೇ ಕಥೆ, ಚಿತ್ರಕಥೆ ಬರೆದಿದ್ದಾರೆ.



## ನವೆಂಬರ್ 14ರಂದು ತೆರೆಗೆ ಬರಲಿದ್ದಾನೆ 'ಉಡಾಳ'

ಯೋಗರಾಜ್ ಸಿನಿಮಾಸ್ ಹಾಗೂ ರವಿ ಶಾಮನೂರು ಫಿಲಂಸ್ ಲಾಂಛನದಲ್ಲಿ ಈ ಹಿಂದೆ "ಪದವಿ ಪೂರ್ವ"ಚಿತ್ರವನ್ನು ನಿರ್ಮಿಸಿದ್ದ ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ಅವರು ನಿರ್ಮಿಸಿರುವ, ಅಮೋಲ್ ಪಾಟೀಲ್ ನಿರ್ದೇಶನದ ಹಾಗೂ "ಪದವಿಪೂರ್ವ" ಖ್ಯಾತಿಯ ಪೃಥ್ವಿ ಶಾಮನೂರು ನಾಯಕನಾಗಿ ನಟಿಸಿರುವ "ಉಡಾಳ" ಚಿತ್ರದ ಟೀಸರ್ ಇತ್ತೀಚೆಗಷ್ಟೇ "ಸರಿಗಮ" ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿತ್ತು. ಟೀಸರ್‌ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಇದೇ ಸಂದರ್ಭದಲ್ಲಿ ಚಿತ್ರತಂಡ ಬಿಡುಗಡೆಯ ದಿನಾಂಕ ಸಹ ಘೋಷಣೆ ಮಾಡಿದೆ. ಬಹು ನಿರೀಕ್ಷಿತ ಈ ಚಿತ್ರ ನವೆಂಬರ್ 14ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಚಿತ್ರದಲ್ಲಿ ಯೋಗರಾಜ್ ಭಟ್ ಬರೆದಿರುವ 5 ಹಾಡುಗಳಿಗೆ ಚೇತನ್ ಡ್ಯಾವಿ ಸಂಗೀತ ನೀಡಿದ್ದು ಜಸ್ಕರಣ್ ಸಿಂಗ್, ಉತ್ತರ ಕರ್ನಾಟಕದಲ್ಲಿ ತಮ್ಮ ಹಾಡಿನ ಮೂಲಕ ಜನಪ್ರಿಯಗೊಂಡ ಮಾಳು ನಿಪ್ನಾಳು, ಬಾಳು ಬೆಳಗುಂದಿ, ಕರಿಬಸವ, ಸೃಷ್ಟಿ ಶಾಮನೂರ್ ಈ ಚಿತ್ರಕ್ಕೆ ಹಾಡಿದ್ದಾರೆ.



## ಶೀರ್ಷಿಕೆ ಹಳೇದು ಕಥೆ ಹೊಸತು

ಮೂರು ದಶಕಗಳ ಹಿಂದೆ ಯಾರಿಗೂ ಹೇಳ್ಬೇಡಿ ಚಿತ್ರವು ತೆರೆಕಂಡು ಹಿಟ್ ಆಗಿತ್ತು. ಕಟ್ ಮಾಡಿದರೆ ಈಗ ಅದೇ ಹೆಸರಿನಲ್ಲಿ ಸಿನಿಮಾವೊಂದು ಸದ್ದಿಲ್ಲದೆ ತೆರೆಗೆ ಬರಲು ಸಿದ್ದವಾಗಿದೆ. ಕಿಚ್ಚ ಸುದೀಪ್ ಈಗಾಗಲೇ ಟ್ರೇಲರ್ ಲೋಕಾರ್ಪಣೆಗೊಳಿಸಿ ಮೆಚ್ಚುಗೆಯ ಮಾತನಾಡಿ ತಂಡಕ್ಕೆ ಶುಭ ಹಾರೈಸಿದ್ದಾರೆ. ಸುದ್ದಿ ಮಾಡುವ ಸಲುವಾಗಿ ಟ್ರೇಲರ್ ಬಿಡುಗಡೆ ಸಮಾರಂಭ ಮೊನ್ನೆಯಷ್ಟೇ ನಡೆಯಿತು. ಬೆಂಗಳೂರಿನಲ್ಲಿ ಇಂಜಿನಿಯರಿಂಗ್ ಶಿಕ್ಷಣ ಮುಗಿಸಿರುವ ಹೈದರಬಾದ್‌ನ ಹರೀಶ್ ಅಮ್ಮಿನೇನಿ ಕನ್ನಡ ಭಾಷೆಯ ಅಭಿಮಾನದ ಮೇಲೆ ಬಂಡವಾಳ ಹೂಡಿದ್ದು, ಸುನಿಲ್‌ಕುಮಾರ್ ನಿರ್ಮಾಣದಲ್ಲಿ ಸಾಥ್ ನೀಡಿದ್ದಾರೆ. ಶಿವಗಣೇಶ್ ಆಕ್ಷನ್ ಕಟ್ ಹೇಳಿದ್ದಾರೆ. ಕಾಮಿಡಿ ಕಿಲಾಡಿಗಳು ಖ್ಯಾತಿಯ ಅಪ್ಪಣ್ಣ ಸ್ನೇಹಿತನಾಗಿ ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ. 'ಟೋಬಿ' ಮತ್ತು 'ಸಪ್ತಸಾಗರದಾಚೆ ಎಲ್ಲೋ' ಸಿನಿಮಾಗಳಲ್ಲಿ ಅಭಿನಯಿಸಿದ್ದ ಚೈತ್ರಾ ಆಚಾರ್ ಡಾಕ್ಟರ್ ಪಾತ್ರದಲ್ಲಿ ನಾಯಕಿ. ಅಶ್ವಿನಿ ಪೊಲೆಪಲ್ಲಿ ಉಪ ನಾಯಕಿ.



## ನಾಯಕ ಎಂ. ಎನ್. ಸುಚಿತ್ ಹುಟ್ಟುಹಬ್ಬದ ದಿನವೇ ಚಿತ್ರ ಆರಂಭ

'4.30 ರಿಂದ 6 ಮುಹೂರ್ತ. ನಾಲ್ವರು ಕಾಣಿಸುತ್ತಿಲ್ಲ' ಎಂಬ ವಿಭಿನ್ನ ಶೀರ್ಷಿಕೆಯುಳ್ಳ ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗೆ ರೇಣುಕಾಂಬ ಥಿಯೇಟರ್ ನಲ್ಲಿ ನೆರವೇರಿತು. ನೀಲಕಂಠ ಫಿಲಂಸ್ ಹಾಗೂ ಧರ್ಮಶ್ರೀ ಎಂಟರ್ ಪ್ರೈಸಸ್ ಲಾಂಛನದಲ್ಲಿ ಧರ್ಮಶ್ರೀ ಮಂಜುನಾಥ್ (ರಥಾವರ) ಹಾಗೂ ಆ ಯೋಗರಾಜ್ ಅವರು ನಿರ್ಮಿಸುತ್ತಿರುವ ಈ ಚಿತ್ರವನ್ನು ಪೂವ್ವೆ ಸುರೇಶ್ ಹಾಗೂ ಶಿವರಾಜ್ ನಿರ್ದೇಶಿಸುತ್ತಿದ್ದಾರೆ. ಧರ್ಮಶ್ರೀ ಮಂಜುನಾಥ್ ಅವರ ಪುತ್ರ ಎಂ. ಎನ್. ಸುಚಿತ್ ನಾಯಕನಾಗಿ ಹಾಗೂ ಸಾತ್ವಿಕ ನಾಯಕಿಯಾಗಿ ನಟಿಸುತ್ತಿದ್ದಾರೆ. ನಾಯಕ ದ್ವಿತೀಯ ನಾಯಕನಾಗಿ ಅನಿಲ್ ಹಾಗೂ ಮತ್ತೊಬ್ಬ ನಾಯಕಿಯಾಗಿ ಧನ್ಯ ಅಭಿನಯಿಸುತ್ತಿದ್ದು, ನಾಯಕ ಎಂ. ಎನ್. ಸುಚಿತ್ ಹುಟ್ಟುಹಬ್ಬದ ದಿನವೇ ಚಿತ್ರ ಆರಂಭವಾಗಿದ್ದು ವಿಶೇಷ. ಮುಹೂರ್ತ ಸಮಾರಂಭದ ನಂತರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಚಿತ್ರ ತಂಡದ ಸದಸ್ಯರು ಮಾತನಾಡಿ, ನಮ್ಮ ನೀಲಕಂಠ ಫಿಲಂಸ್ ಲಾಂಛನದಲ್ಲಿ ನಿ ರ್ಮಾಣವಾಗುತ್ತಿರುವ ಐದನೇ ಚಿತ್ರ ಇದು ಎಂದರು.






## ಗುಮ್ಮಡಿ ನರಸಯ್ಯನಾದ ಶಿವಣ್ಣ..



ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಹೊಸ ಸಿನಿಮಾ ದೀಪಾವಳಿ ಹಬ್ಬದ ವಿಶೇಷವಾಗಿ ಘೋಷಣೆಯಾಗಿದೆ. ರಾಜಕಾರಣಿಯಾಗಿ ಶಿವಣ್ಣ ಪ್ರತ್ಯಕ್ಷರಾಗಿದ್ದಾರೆ. ಆಂಧ್ರ ಮೂಲದ ಯೆಲ್ಲಾಂಡು ರಾಜಕಾರಣಿ ಗುಮ್ಮಡಿ ನರಸಯ್ಯ ಜೀವನಗಾಥೆಯಲ್ಲಿ ಕರುನಾಡ ಕಿಂಗ್ ಮಿಂಚಲಿದ್ದಾರೆ. ತೆಲುಗು ಸಿನಿಮಾಗಳಾದ ಚಿರು ಗೋಡವಾಲು, ಲಾವಣ್ಯ ವಿತ್ ಲವ್ ಬಾಯ್ಸ್ ಮುಂತಾದ ಸಿನಿಮಾಗಳಲ್ಲಿ ನಟಿಸಿರುವ ಪರಮೇಶ್ವರ್ ಹಿವ್ರಲೆ ಗುಮ್ಮಡಿ ನರಸಯ್ಯ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇದು ಅವರ ಚೊಚ್ಚಲ ನಿರ್ದೇಶನದ ಚಿತ್ರ. ಸೈಕಲ್ ತಳ್ಳುತ್ತಾ, ಹೆಗಲಿಗೆ ಕೆಂಪು ಶಾಲು ಹಾಕಿಕೊಂಡು, ಕನ್ನಡಕ ಹಾಕಿಕೊಂಡ ಸರ್ಕಾರಿ ಕಚೇರಿ ಮುಂದೆ ಶಿವಣ್ಣ ಕಾಣಿಸಿಕೊಂಡಿದ್ದಾರೆ. ಈ ಚಿತ್ರಕ್ಕೆ ಎನ್.ಸುರೇಶ್ ರೆಡ್ಡಿ ಚಿತ್ರಕ್ಕೆ ಬಂಡವಾಳ ಹಾಕಿದ್ದಾರೆ.

## ಯಶಸ್ವಿ ಪ್ರಚಾರಕರ್ತನ ಚಿತ್ರಕ್ಕೆ ಮಗನೇ ನಿರ್ದೇಶಕ..



ಕನ್ನಡ ಚಿತ್ರರಂಗದಲ್ಲಿ ನಿರ್ಮಾಪಕರು, ನಿರ್ದೇಶಕರೂ ಆದಿಯಾಗಿ ಚಿತ್ರತಂಡ ಮತ್ತು ಸಿನಿಮಾ ಪತ್ರಕರ್ತರೊಂದಿಗೆ ಸಂಪರ್ಕ ಕೊಂಡಿಯಾಗಿ ಕಳೆದ 5 ದಶಕಗಳಿಂದ ಕೆಲಸ ಮಾಡುತ್ತಿರುವ "ಶ್ರೀ ರಾಘವೇಂದ್ರ ಚಿತ್ರವಾಣಿ" ಸಂಸ್ಥೆ ಹಲವು ಚಿತ್ರಗಳನ್ನು ನಿರ್ಮಾಣದಲ್ಲಿಯೂ ಗುರುತಿಸಿಕೊಂಡು ಚಿತ್ರರಂಗಕ್ಕೆ ತನ್ನದೇ ಆದ ವಿಶಿಷ್ಟ ಕೊಡುಗೆ ಮತ್ತು ಸೇವೆ ನೀಡಿದೆ. ಶ್ರೀ ರಾಘವೇಂದ್ರ ಚಿತ್ರವಾಣಿ ಸಂಸ್ಥೆಯ ಸ್ಥಾಪಕರಾದ ಡಿ.ವಿ ಸುಧೀಂದ್ರ ಅವರು ಹಲವು ಯಶಸ್ವಿ ಚಿತ್ರಗಳನ್ನು ನಿರ್ಮಾಣ ಮಾಡಿದ್ದರು. ಈ ಸಂಸ್ಥೆ ಮುನ್ನಡೆಸುತ್ತಿರುವ ಹಿರಿಯ ಸಿನಿಮಾ ಪ್ರಚಾರಕರ್ತ ಸುಧೀಂದ್ರ ವೆಂಕಟೇಶ್ ತಮ್ಮ ಪುತ್ರ ಪವನ್ ವೆಂಕಟೇಶ್ ಆಕ್ಷನ್ ಕಟ್ ಹೇಳಿರುವ " ಫಸ್ಟ್ ಸ್ಯಾಲರಿ" ಕಿರುಚಿತ್ರವನ್ನು ನಿರ್ಮಿಸಿದ್ದು, ಇದರ ಪೋಸ್ಟರ್ ದೀಪಾವಳಿ ಸಂದರ್ಭದಲ್ಲಿ ಬಿಡುಗಡೆಯಾಗಿದೆ.

## ರಾಮಾ ರಾಮಾ ರೇ ಸತ್ಯ ಧೀರೆನ್ ಹೊಸ ಸಿನಿಮಾ..

ಬೆಳಕಿನ ಹಬ್ಬ ದೀಪಾವಳಿಯ ಹೊನ್ನ ಕಿರಣಗಳು ಬಣ್ಣ ಬಣ್ಣದ ಚಿತ್ತಾರಗಳನ್ನು ಎರಕ ಹೊಯ್ಯುವ ಹೊತ್ತಿನಲ್ಲಿ, ಚಿತ್ರ ರಸಿಕರಿಗಾಗಿ ಮತ್ತೊಂದು ಸಂತಸದ ಸುದ್ದಿ "ಆರ್.ವಿ ಮಲ್ಟಿ ಸಿನಿಸ್ ಕ್ರಿಯೇಟರ್ಸ್" ಕಡೆಯಿಂದ ಹೊರಬಿದ್ದಿದ್ದೆ. "ರಾಮಾ ರಾಮಾ ರೇ" ಖ್ಯಾತಿಯ ನಿರ್ದೇಶಕ "ಡಿ. ಸತ್ಯ ಪ್ರಕಾಶ್" ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಹೊಸ ಚಿತ್ರದ ನಿರ್ದೇಶನದ ಕಾರ್ಯ ಯೋಜನೆಯೊಂದಿಗೆ ಕಣಕಿಳಿದಿದ್ದಾರೆ. ಈ ಚಿತ್ರಕ್ಕಾಗಿ ಅವರು ನಾಯಕ ನಟ "ಶಿವ 143 ಖ್ಯಾತಿಯ ಧೀರೆನ್" ಅವರ ಜೊತೆ ಕೈ ಜೋಡಿಸಿದ್ದಾರೆ. ಸದಾ ಹೊಸತನ, ವಿಷೇಶ ಪ್ರಯೋಗಾತ್ಮಕ ಮತ್ತು ಸಂದೇಶಾತ್ಮಕ ಕಥೆಗಳಿಗೆ ತೊಡಗಿಸಿಕೊಂಡು ಬಂದಿರುವ ನಿರ್ದೇಶಕ "ಡಿ. ಸತ್ಯ ಪ್ರಕಾಶ್" ಅವರಿಗೆ "ಕರುನಾಡ ಚಕ್ರವರ್ತಿ ಡಾ. ಶಿವರಾಜ್ ಕುಮಾರ್" ಅವರು ಚಿತ್ರದ ಕಥೆ ಕೇಳಿ ತಮ್ಮ ಮೆಚ್ಚುಗೆ ವ್ಯಕ್ತಪಡಿಸಿ ತಂಡಕ್ಕೆ ವಿಶೇಷ ಪ್ರೋತ್ಸಾಹ ನೀಡುವುದಾಗಿ ಹೇಳಿಕೊಂಡಿದ್ದಾರೆ.



## ಯೂಟ್ಯೂಬ್‌ನಲ್ಲಿ 'ಮಿಡಲ್ ಕ್ಲಾಸ್ ಫ್ಯಾಮಿಲಿ'

ಇದೇ ವರ್ಷ ಜನವರಿಯಲ್ಲಿ ತುಳುನಾಡಿನಾದ್ಯಂತ ಅದ್ದೂರಿ ಬಿಡುಗಡೆಯಾಗಿ ಚಿತ್ರಮಂದಿರಗಳಲ್ಲಿ 160 ದಿನಕ್ಕೂ ಹೆಚ್ಚು ಪ್ರದರ್ಶನಗೊಂಡಿದ್ದ "ಮಿಡಲ್ ಕ್ಲಾಸ್ ಫ್ಯಾಮಿಲಿ" ತುಳುನಾಡಿನ ಚಿತ್ರಾಭಿಮಾನಿಗಳ ಮನಸ್ಸು ಮುಟ್ಟುವಲ್ಲಿ ಯಶಸ್ವಿಯಾಗಿದೆ. ಅನೇಕರು ಸಿನಿಮಾ ನೋಡುವ ಇಚ್ಛೆಯನ್ನು ನಮ್ಮಲ್ಲಿ ತಿಳಿಸಿದ್ದು ವೀಕ್ಷಕರ ಕೋರಿಕೆಯಂತೆ ವಿಶ್ವದಾದ್ಯಂತ ಇರುವ ತುಳು ಚಿತ್ರಾಭಿಮಾನಿಗಳ ಮನೆ ಮನೆಗೆ ತಲುಪಲು ನಾವು ನಮ್ಮ ಮಿಡಲ್ ಕ್ಲಾಸ್ ಫ್ಯಾಮಿಲಿ ತುಳು ಸಿನಿಮಾವನ್ನು ನಮ್ಮ ಸಂಸ್ಥೆಯ ಅಧಿಕೃತ ಯೂಟ್ಯೂಬ್ ಚಾನೆಲ್ ವೈಭವ್ ಫ್ಲಿಕ್ಸ್ ಮೂಲಕ ಉಚಿತವಾಗಿ ಪ್ರಸಾರ ಮಾಡಲು ನಿರ್ಧರಿಸಿರುತ್ತೇವೆ. ಅಕ್ಟೋಬರ್ 25 ಶನಿವಾರದಿಂದ ಈ ಸಿನಿಮಾ ಜನರಿಗೆ ನೋಡಲು ಲಭ್ಯವಿರುತ್ತದೆ ಎಂದು ನಿರ್ಮಾಪಕರಾದ ಆನಂದ್ ಎನ್. ಕುಂಪಲ ತಿಳಿಸಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021